ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆಗುರುತಿಲ್ಲದಪ್ರಶ್ನೆಸಂಖ್ಯೆ	:	2108
ಉತ್ತರಿಸಬೇಕಾಗಿದ್ದದಿನಾಂಕ	:	25.03.2021
ಸದಸ್ಯರಹೆಸರು	:	ಶ್ರೀ ಆರ್.ಬಿ. ತಿಮ್ಮಾಪೂರ (ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ಸಚಿವರು	:	ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರು.

ಕ್ರ. ಸಂ	ಪ್ರಶ್ನೆ	ಉತ್ತರ
ಅ)	ರಾಜ್ಯದಲ್ಲಿ ಕುಸ್ತಿ ಕ್ರೀಡೆಗೆ ನೀಡುತ್ತಿರುವ ಪ್ರೋತ್ಸಾಹಗಳೇನು;	ಬೆಳಗಾವಿ, ದಾವಣಗೆರೆ, ಗದಗ, ಮೈಸೂರು, ಹಳಿಯಾಳ, ಬಾಗಲಕೋಟೆ, ಧಾರವಾಡ ಮತ್ತು ಶಿವಮೊಗ್ಗ ಜಿಲ್ಲೆಗಳಲ್ಲಿ ಕುಸ್ತಿ ಕ್ರೀಡಾ ವಸತಿ ನಿಲಯಗಳನ್ನು ಸ್ಥಾಪಿಸಿದ್ದು, ಕ್ರೀಡಾಪಟುಗಳಿಗೆ ಪ್ರವೇಶಾವಕಾಶ ಕಲ್ಪಿಸಲಾಗಿದೆ. ಕುಸ್ತಿ ಜನಪ್ರಿಯವಾಗಿರುವ ಜಿಲ್ಲೆಗಳ ಕ್ರೀಡಾಂಗಣಗಳಲ್ಲಿ ತರಬೇತಿಗಾಗಿ ಆಧುನಿಕ ಕುಸ್ತಿಮ್ಯಾಟ್ ನೀಡಿ ಪ್ರೋತ್ಸಾಹಿಸಲಾಗುತ್ತಿದೆ.
ಆ)	ಕುಸ್ತಿಪಟುಗಳ ಸಂಖ್ಯೆ ಎಷ್ಟು; ರಾಜ್ಯ ಮತ್ತು ಅಂತರ ರಾಜ್ಯಮಟ್ಟದಲ್ಲಿ ಸ್ಪರ್ಧಿಸಿರುವ ಕುಸ್ತಿಪಟುಗಳ ಸಂಖ್ಯೆ ಎಷ್ಟು; ಇವರಿಗೆ ಸರ್ಕಾರದಿಂದ ನೀಡುತ್ತಿರುವ ಸೌಲಭ್ಯಗಳೇನು;	ರಾಜ್ಯ ಮತ್ತು ಅಂತರ ರಾಜ್ಯಮಟ್ಟದಲ್ಲಿ ಸ್ಪರ್ಧಿಸಿರುವ ಕುಸ್ತಿಪಟುಗಳ ಸಂಖ್ಯೆ:1500. ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಕ್ರೀಡಾ ವಸತಿ ನಿಲಯಗಳಲ್ಲಿ 2019-20ನೇ ಸಾಲಿನಲ್ಲಿ 206 ಕುಸ್ತಿಪಟುಗಳಿಗೆ ಪ್ರವೇಶ ನೀಡಲಾಗಿದೆ. ಈ ಪೈಕಿ 118 ಕುಸ್ತಿಪಟುಗಳು ರಾಜ್ಯ ಮತ್ತು ರಾಷ್ಟ್ರೀಯ ಮಟ್ಟದಲ್ಲಿ ಸ್ಪರ್ಧಿಸಿರುತ್ತಾರೆ.
ಇ)	ಕುಸ್ತಿಪಟುಗಳಿಗೆ ಪ್ರೋತ್ಸಾಹ ನೀಡಲು ಹಮ್ಮಿಕೊಂಡಿರುವ ಕಾರ್ಯಕ್ರಮಗಳೇನು?	ಗ್ರಾಮೀಣ ದೇಸೀ ಕ್ರೀಡೆಯಾದ ಕುಸ್ತಿಯನ್ನು ಉಳಿಸಿ ಬೆಳೆಸಲು ಹಾಗೂ ಎಳೆಯ ಹಂತದಲ್ಲಿಯೇ ಪ್ರತಿಭೆಗಳನ್ನು ಗುರುತಿಸಲು ಕುಸ್ತಿ ಹಬ್ಬವನ್ನು ಹಮ್ಮಿಕೊಳ್ಳಲಾಗುತ್ತಿದೆ. ಸದರಿ ಕ್ರೀಡಾಪಟುಗಳಿಗೆ ನುರಿತ ತರಬೇತುದಾರರಿಂದ ಕ್ರೀಡಾ ತರಬೇತಿ; ವಸತಿ ಸೌಲಭ್ಯ; ಊಟೋಪಹಾರ; ಪದಕ ವಿಜೇತ ಕ್ರೀಡಾಪಟುಗಳಿಗೆ ನಗದು ಪ್ರೋತ್ಸಾಹ ಧನ; ಕ್ರೀಡಾ ಸಮವಸ್ತ್ರ ಮತ್ತು ಪಂದ್ಯಾವಳಿಗಳಲ್ಲಿ ಭಾಗವಹಿಸಲು ಪ್ರಯಾಣ ಭತ್ಯೆ/ ದಿನಭತ್ಯೆ; ರಾಷ್ಟ್ರ ಹಾಗೂ ಅಂತರ ರಾಜ್ಯಮಟ್ಟದ ಕ್ರೀಡಾಕೂಟಗಳಲ್ಲಿ ಭಾಗವಹಿಸಿ ಪದಕ ವಿಜೇತರಾದ ಕುಸ್ತಿ ಕ್ರೀಡಾಪಟುಗಳಿಗೆ ನಗದು ಬಹುಮಾನ; ರಾಜ್ಯಮಟ್ಟದಲ್ಲಿ ಪ್ರಥಮ ಸ್ಥಾನ ಮತ್ತು ರಾಷ್ಟ್ರಮಟ್ಟದಲ್ಲಿ ಭಾಗವಹಿಸಿ ಪದಕ ಪಡೆದ ಕ್ರೀಡಾ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ, ರಾಷ್ಟ್ರ ಮತ್ತು ಅಂತಾರಾಷ್ಟ್ರೀಯ ಮಟ್ಟದ ಕ್ರೀಡಾ ಕೂಟಗಳಲ್ಲಿ ಭಾಗವಹಿಸಿ ಪದಕ ಪಡೆದವರಿಗೆ ಶೈಕ್ಷಣಿಕ ಶುಲ್ಕ ಮರುಪಾವತಿಯನ್ನು ಮಾಡಲಾಗುತ್ತದೆ.

ವೈಎಸ್‌ಡಿ - ಇಬಿಬಿ / 88 / 2021

(ಡಾ|| ನಾರಾಯಣಗೌಡ)
ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ
ಯೋಜನೆ, ಕಾರ್ಯಕ್ರಮ ಸಂಯೋಜನೆ
ಮತ್ತು ಸಾಂಖ್ಯಿಕ ಸಚಿವರು.